## ವಿಧಾನಪರಿಷತ್ ಸದಸ್ಯರಾದ ಮಾನ್ಯ ಶ್ರೀ ಮರಿತಿಬ್ಬೇಗೌಡ ಇವರು ಮಂಡಿಸಿರುವ ನಿಯಮ-72ಕ್ಕೆ ಉತ್ತರ

**ವಿಷಯ:-**

**ಅನುದಾನಿತ ಪ್ರಾಥಮಿಕ, ಪ್ರೌಢ ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ಜನವರಿ 2016 ರಿಂದ ಇದುವರೆವಿಗೂ ಸಾಕಷ್ಟು ಬೋಧಕ/ಬೋಧಕೇತರ ಹುದ್ದೆಗಳು ನಿವೃತ್ತಿ, ರಾಜೀನಾಮೆ ಇನ್ನಿತರೆ ಕಾರಣಗಳಿಂದ ಖಾಲಿ ಬಿದ್ದಿವೆ. ಖಾಲಿ ಇರುವ ಸದರಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸರ್ಕಾರ ಅನುಮತಿ ನೀಡದೆ ಇರುವುದರಿಂದ ಅನುದಾನಿತ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳ ಬೋಧನೆಗೆ ತುಂಬಾ ತೊಂದರೆಯಾಗುತ್ತಿದೆ. ಅಲ್ಲದೆ ಕೆಲವು ಶಾಲಾ ಕಾಲೇಜುಗಳನ್ನು ಮುಚ್ಚುವ ಪರಿಸ್ಥಿತಿ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಪ್ರಸ್ತಾಪಿಸಲಾಗಿದೆ.**

**ಉತ್ತರ:**

ಖಾಸಗಿ ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಹೆಚ್ಚುವರಿ ಎಂದು ಗುರುತಿಸಲಾಗುವ ಶಿಕ್ಷಕರುಗಳಿಂದ ಭರ್ತಿ ಮಾಡಲಾಗುತ್ತಿದೆ. ಖಾಸಗಿ ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ದಿನಾಂಕ:31.12.2015ರ ಪೂರ್ವದಲ್ಲಿ ಖಾಲಿಯಾಗಿರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ಅನುಮತಿ ನೀಡಿರುತ್ತದೆ.

ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ದಿನಾಂಕ:01.01.2016ರ ನಂತರ ಖಾಲಿಯಾಗಿರುವ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ಆರ್ಥಿಕ ಇಲಾಖೆಯ ಸಹಮತಿಯನ್ನು ಕೋರಲಾಗಿತ್ತು. ಆದರೆ, ಆರ್ಥಿಕ ಇಲಾಖೆಯು ದಿನಾಂಕ:28.11.2022ರಂದು ನೀಡಿರುವ ಅಭಿಪ್ರಾಯದಲ್ಲಿ ದಿನಾಂಕ:31.12.2015ರ ಅಂತ್ಯಕ್ಕೆ ಖಾಲಿಯಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಆದ್ಯತೆ ನೀಡುವಂತೆ ತಿಳಿಸಿರುತ್ತದೆ. ಆದ್ದರಿಂದ ದಿನಾಂಕ:31.12.2015ರ ಪೂರ್ವದಲ್ಲಿ ಖಾಲಿಯಾಗಿರುವ ಹುದ್ದೆಗಳನ್ನು ಭರ್ತಿ ಮಾಡಿದ ನಂತರ ದಿನಾಂಕ:01.01.2016ರ ನಂತರ ಖಾಲಿಯಾಗಿರುವ ಹುದ್ದೆಗಳನ್ನು ಭರ್ತಿ ಮಾಡಲು ನಿಯಮಾನುಸಾರ ಪರಿಶೀಲಿಸಲಾಗುವುದು.

**ಸಂಖ್ಯೆ: ಇಪಿ 633 ಎಸ್‌ಇಎಸ್ 2022**

**(ಬಿ.ಸಿ.ನಾಗೇಶ್)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು**